# Bangalore
# Regional News
# 04.09.2026: 14.30hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು :

1. ರಾಜ್ಯದಲ್ಲಿ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿ ಎದುರಿಸಲು ಮೋಡ ಬಿತ್ತನೆ; ಸಚಿವ ಚಲುವರಾಯಸ್ವಾಮಿ ಕಾರ್ಯಕ್ರಮಕ್ಕೆ ಚಾಲನೆ
2. ಬೆಂಗಳೂರಿನಲ್ಲಿ ಜಲ ಭದ್ರತೆ ಮತ್ತು ಸ್ಥಿತಿ ಸ್ಥಾಪಕ ಯೋಜನೆ ಕಾಮಗಾರಿಗೆ ವಿಶ್ವ ಬ್ಯಾಂಕ್ ಕಾರ್ಯಪಡೆ ಮೆಚ್ಚುಗೆ
3. ನಾಡಿನಾದ್ಯಂತ ಕೃಷ್ಣ ಜನ್ಮಾಷ್ಟಮಿ ಆಚರಣೆ; ರಾಧಾ, ಕೃಷ್ಣರ ವೇಷದಲ್ಲಿ ಸಂಭ್ರಮಿಸಿದ ಚಿಣ್ಣರು
4. ಪರಿಸರಸ್ನೇಹಿ ಗೌರಿ - ಗಣೇಶ ಮೂರ್ತಿಗಳನ್ನು ಸ್ಥಾಪಿಸಲು ಸರ್ಕಾರದ ಮನವಿ

**********

ರಾಜ್ಯದಲ್ಲಿ ಎದುರಾಗಿರುವ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸುವ ಸಲುವಾಗಿ, ರಾಜ್ಯ ಸರ್ಕಾರ 'ಮೋಡ ಬಿತ್ತನೆ' ಆರಂಭಿಸಿದೆ. ಬೆಂಗಳೂರಿನ ಎಚ್.ಎ.ಎಲ್ ವಿಮಾನ ನಿಲ್ದಾಣದಲ್ಲಿಂದು ಮೋಡ ಬಿತ್ತನೆಗಾಗಿಯೇ ಸಿದ್ಧಗೊಂಡಿರುವ ವಿಶೇಷ ಲಘು ವಿಮಾನಕ್ಕೆ ರಾಷ್ಟ್ರಧ್ವಜ ಹಾಗೂ ನಾಡಧ್ವಜ ತೋರುವ ಮೂಲಕ ಮೋಡ ಬಿತ್ತನೆ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅಧಿಕೃತವಾಗಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಸಚಿವರು, ರಾಜ್ಯದಲ್ಲಿ ಈ ವರ್ಷ ಮಳೆಯ ಪ್ರಮಾಣ ಕಡಿಮೆಯಾಗಿದೆ. ಮುಂದಿನ ದಿನಗಳಲ್ಲಿ ತೀವ್ರ ಬರ ಎದುರಾಗುವ ಸಾಧ್ಯತೆಗಳಿದ್ದು, ಅದರ ನಿಖರ ಪ್ರಮಾಣವನ್ನು ಈಗಲೇ ಅಂದಾಜಿಸಲು ಸಾಧ್ಯವಿಲ್ಲ. ಈ ತಿಂಗಳ ಅಂತ್ಯಕ್ಕೆ ಮುಂಗಾರು ಮಳೆಗಾಲ ಮುಕ್ತಾಯಗೊಳ್ಳಲಿದೆ. ಒಂದು ವೇಳೆ ಈ ತಿಂಗಳ ಅಂತ್ಯದೊಳಗೆ ಕುಡಿಯುವ ನೀರಿನ ಶೇಖರಣೆ ಆಗದಿದ್ದರೆ, ಮುಂದಿನ ಜೂನ್ ಅಂತ್ಯದವರೆಗೂ ತೀವ್ರ ಅಭಾವ ಎದುರಾಗಲಿದೆ ಎಂದರು. ನೀರಿನ ಅಭಾವವನ್ನು ಸರಿದೂಗಿಸಲು ಹಾಗೂ ರೈತರ ಹಿತದೃಷ್ಟಿಯಿಂದ ರಾಜ್ಯ ಸರ್ಕಾರ ಮೋಡ ಬಿತ್ತನೆಗೆ ಮುಂದಾಗಿದೆ. ಒಟ್ಟು ೨೮ ಕೋಟಿ ೫೨ ಲಕ್ಷ ರೂಪಾಯಿ ಅಂದಾಜು ವೆಚ್ಚದ ಕಾರ್ಯಕ್ರಮ ಇದಾಗಿದೆ. ಮೋಡ ಬಿತ್ತನೆ ಕಾರ್ಯವನ್ನು ವೈಜ್ಞಾನಿಕವಾಗಿ ಮತ್ತು ಪರಿಣಾಮಕಾರಿಯಾಗಿ ನಿರ್ವಹಿಸಲು ಸರ್ಕಾರ ಎರಡು ಸಮಿತಿಗಳನ್ನು ಸರಕಾರ ಈಗಾಗಲೇ ರಚಿಸಿದೆ. ಮೇಲ್ವಿಚಾರಣಾ ಸಮಿತಿಯಲ್ಲಿ ಸರ್ಕಾರದ ಅಪರ

ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ನೇತೃತ್ವದಲ್ಲಿ. ಇದು ಯೋಜನೆಯ ಸಮಗ್ರ ಉಸ್ತುವಾರಿ ಮತ್ತು ಪರಿಶೀಲನೆ ನಡೆಸಲಿದೆ. ತಾಂತ್ರಿಕ ಸಲಹಾ ಮತ್ತು ಮೌಲ್ಯಮಾಪನ ಸಮಿತಿ ತಾಂತ್ರಿಕ ಮಾರ್ಗದರ್ಶನ ನೀಡಲಿದ್ದು, ಪ್ರತಿ ಎರಡು ಗಂಟೆಗೊಮ್ಮೆ ಮೋಡ ಬಿತ್ತನೆಯ ಮಾಹಿತಿ ಹಾಗೂ ಅದರ ಪರಿಣಾಮವನ್ನು ತಿಳಿಸಲಿದೆ. ಸಾಮಾನ್ಯವಾಗಿ ಮೋಡ ಬಿತ್ತನೆ ಪ್ರಕ್ರಿಯೆ ನಡೆದ ೩೦ ನಿಮಿಷಗಳಿಂದ ೧ ಗಂಟೆಯೊಳಗೆ ಮಳೆಯಾಗುವ ಸಾಧ್ಯತೆ ಇರುತ್ತದೆ. ರಾಜ್ಯದಲ್ಲಿ ನಿರ್ದಿಷ್ಟವಾಗಿ ಇಂತಹುದೇ ಜಿಲ್ಲೆ ಎಂದು ಮೊದಲೇ ನಿರ್ಧರಿಸಲಾಗುವುದಿಲ್ಲ. ಬದಲಾಗಿ, ತಾಂತ್ರಿಕ ತಂಡವು ನಿರಂತರವಾಗಿ ನೀಡುವ ವರದಿಗಳ ಆಧಾರದ ಮೇಲೆ, ಮಳೆ ಕೊರತೆ ಇರುವ ಪ್ರದೇಶಗಳು, ಪ್ರಮುಖ ಜಲಾಶಯಗಳ ಜಲಾನಯನ ಪ್ರದೇಶಗಳು ಹಾಗೂ ಕೃಷಿ ಬಿಕ್ಕಟ್ಟು ಎದುರಿಸುತ್ತಿರುವ ಜಿಲ್ಲೆಗಳ ಆಕಾಶದಲ್ಲಿ ಸೂಕ್ತ ಮೋಡಗಳು ಕಂಡುಬಂದಾಗ ತಕ್ಷಣವೇ ಅಲ್ಲಿಗೆ ವಿಮಾನ ತೆರಳಿ ಬಿತ್ತನೆ ಕಾರ್ಯ ನಡೆಸುತ್ತದೆ. ಪ್ರತಿ ೨ ಗಂಟೆಗೊಮ್ಮೆ ಲಭ್ಯವಾಗುವ ಹವಾಮಾನ ದತ್ತಾಂಶವೇ ಕಾರ್ಯಾಚರಣೆಯ ಸ್ಥಳವನ್ನು ನಿರ್ಧರಿಸುತ್ತದೆ ಎಂದು ಅಧಿಕೃತ ವರದಿಯಲ್ಲಿ ತಿಳಿಸಲಾಗಿದೆ.

**********

ವಿಶ್ವ ಬ್ಯಾಂಕ್‌ನಿಂದ ಹಣಕಾಸು ನೆರವು ಪಡೆಯುತ್ತಿರುವ ಕರ್ನಾಟಕ ಜಲ ಭದ್ರತೆ ಮತ್ತು ಸ್ಥಿತಿಸ್ಥಾಪಕತ್ವ ಯೋಜನೆ ಅಡಿಯಲ್ಲಿ ಬೆಂಗಳೂರಿನಲ್ಲಿ ನಡೆಯುತ್ತಿರುವ ಕಾಮಗಾರಿಗಳನ್ನು ವಿಶ್ವ ಬ್ಯಾಂಕ್ ಕಾರ್ಯಪಡೆ ಇಂದು ಪರಿಶೀಲಿಸಿತು. ಮಹದೇವಪುರ ವಿಧಾನಸಭಾ ಕ್ಷೇತ್ರದ ವಾರ್ತೂರು ಕೋಡಿ ವೃತ್ತದಲ್ಲಿ ನಡೆಯುತ್ತಿರುವ ಮಳೆನೀರು ಕಾಲುವೆ ಅಭಿವೃದ್ಧಿ ಕಾಮಗಾರಿ ಪ್ರದೇಶಕ್ಕೆ ಕಾರ್ಯಪಡೆ ಭೇಟಿ ನೀಡಿತು. ಮಳೆನೀರು ಕಾಲುವೆಯನ್ನು ಅಭಿವೃದ್ಧಿಪಡಿಸುವುದರ ಜೊತೆಗೆ, ಕಾಲುವೆಯುದ್ದಕ್ಕೂ ಸಾರ್ವಜನಿಕರಿಗಾಗಿ ವಾಕಿಂಗ್ ಹಾಗೂ ಮನರಂಜನಾ ಸೌಲಭ್ಯ ಕಲ್ಪಿಸಿರುವ ನವೀನ ಮಾದರಿ ಬಗ್ಗೆ ವಿಶ್ವ ಬ್ಯಾಂಕ್ ತಂಡ ಮೆಚ್ಚುಗೆ ವ್ಯಕ್ತಪಡಿಸಿತು.

**********

ರಾಜ್ಯಾದ್ಯಂತ ಇಂದು ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಸಡಗರ, ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮಂಗಳೂರು ನಗರದ ದೇವಾಲಯಗಳು, ಇಸ್ಕಾನ್ ಸೇರಿದಂತೆ ಕೃಷ್ಣಮಂದಿರಗಳಲ್ಲಿ ವಿಶೇಷ ಪೂಜೆ, ಪುನಸ್ಕಾರಗಳು ನಡೆದಿವೆ. ಮಂಗಳೂರಿನ ಕದ್ರಿ ಮಂಜುನಾಥ ದೇವಸ್ಥಾನದ ಆವರಣದಲ್ಲಿ ರಾಷ್ಟ್ರೀಯ ಮಕ್ಕಳ ಉತ್ಸವ ಹಾಗೂ ಶ್ರೀಕೃಷ್ಣ ವೇಷ ಸ್ಪರ್ಧೆಗೆ ಸಿಂಗಾರಗೊಂಡಿದ್ದು, ಸಾವಿರಾರು ಸಂಖ್ಯೆಯಲ್ಲಿ ಪುಟಾಣಿ ಕೃಷ್ಣರು ಪಾಲ್ಗೊಂಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಕೃಷ್ಣ ಜನ್ಮಾಷ್ಟಮಿಯನ್ನು ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಗುತ್ತಿದೆ. ಜಿಲ್ಲೆಯ ಶ್ರೀ ಕೃಷ್ಣ ಹಾಗೂ ವೇಣುಗೋಪಾಲ ದೇವಾಲಯಗಳಲ್ಲಿ ವಿಶೇಷ ಅಲಂಕಾರ ಹಾಗೂ ಪೂಜಾ ಕಾರ್ಯಕ್ರಮಗಳನ್ನು

ಹಮ್ಮಿಕೊಳ್ಳಲಾಗಿದೆ. ಶಾಲೆಗಳು, ದೇವಾಲಯಗಳು ಸೇರಿದಂತೆ ವಿವಿದೆಡೆ ಕೃಷ್ಣ ರಾಧೆ ವೇಷಧಾರಿಗಳ ಪ್ರದರ್ಶನ ಮತ್ತು ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಶಾಸಕ ಧೀರಜ್ ಮುನಿರಾಜು ಕೃಷ್ಣನ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ವಿಜಯಪುರದಲ್ಲಿ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮವನ್ನು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಉದ್ಘಾಟಿಸಿ ಮಾಡನಾಡಿ, ಭಗವದ್ಗೀತೆಯಲ್ಲಿನ ತತ್ವ, ಜ್ಞಾನ ಹಾಗೂ ಜೀವನ ಮೌಲ್ಯಗಳನ್ನು ಪ್ರತಿಯೊಬ್ಬರೂ ಅರಿತುಕೊಂಡು, ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

**********

ಗೌರಿ ಗಣೇಶ ಹಬ್ಬವನ್ನು ವಾತಾವರಣ ರಕ್ಷಣೆ ದೃಷ್ಟಿಯಿಂದ ಪರಿಸರಸ್ನೇಹಿ ರೀತಿಯಲ್ಲಿ ಆಚರಿಸಬೇಕೆಂದು ಸರ್ಕಾರ ಮನವಿ ಮಾಡಿದೆ. ಗಣೇಶ ಚತುರ್ಥಿ ಹಬ್ಬದ ಸಂದರ್ಭದಲ್ಲಿ ಜಲಮೂಲಗಳು ಕಲುಷಿತಗೊಳ್ಳುವುದನ್ನು ತಡೆಯುವ ನಿಟ್ಟಿನಲ್ಲಿ ಸಾರ್ವಜನಿಕರು ಕಡ್ಡಾಯವಾಗಿ ಪರಿಸರ ಸ್ನೇಹಿ ಗಣೇಶ ವಿಗ್ರಹಗಳನ್ನೇ ಪ್ರತಿಷ್ಠಾಪಿಸಬೇಕು ಎಂದು ದಾವಣಗೆರೆ ಮಹಾನಗರ ಪಾಲಿಕೆ ಆಯುಕ್ತ ಡಾ. ಮಹಾಂತೇಶ್ ಕೋರಿದ್ದಾರೆ. ನಿಯಮ ಉಲ್ಲಂಘಿಸಿ ಪಿಒಪಿ ಹಾಗೂ ರಾಸಾಯನಿಕ ಬಣ್ಣದ ಗಣೇಶ ವಿಗ್ರಹಗಳನ್ನು ತಯಾರಿಸುವುದು ಅಥವಾ ಮಾರಾಟ ಮಾಡುವುದು ಕಂಡುಬಂದರೆ, ಅಂತಹ ವಿಗ್ರಹಗಳನ್ನು ವಶಪಡಿಸಿಕೊಳ್ಳಲಾಗುವುದು. ಜೊತೆಗೆ ಸಂಬಂಧಪಟ್ಟ ತಯಾರಕರು ಮತ್ತು ಮಾರಾಟಗಾರರಿಗೆ ೧೦ ಸಾವಿರ ರೂಪಾಯಿ ದಂಡ ವಿಧಿಸಿ, ಕಾನೂನು ರೀತ್ಯಾ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಆಯುಕ್ತರು ತಿಳಿಸಿದ್ದಾರೆ. ಆದ್ದರಿಂದ ಸಾರ್ವಜನಿಕರು ಜೇಡಿಮಣ್ಣು, ಅರಿಶಿನ, ಬೆಲ್ಲ ಹಾಗೂ ಇತರೆ ಪರಿಸರ ಸ್ನೇಹಿ ವಸ್ತುಗಳಿಂದ ಸಿದ್ಧಪಡಿಸಿದ, ನೈಸರ್ಗಿಕ ಬಣ್ಣದ ವಿಗ್ರಹಗಳನ್ನು ಮಾತ್ರ ಉಪಯೋಗಿಸಬೇಕು. ಹಬ್ಬವನ್ನು ಸುಸ್ಥಿರ ಹಾಗೂ ಪರಿಸರ ಸ್ನೇಹಿಯಾಗಿ ಆಚರಿಸಲು ಸಾರ್ವಜನಿಕರು, ವಿಗ್ರಹ ತಯಾರಕರು ಹಾಗೂ ವ್ಯಾಪಾರಿಗಳು ಪಾಲಿಕೆಯೊಂದಿಗೆ ಕೈಜೋಡಿಸಬೇಕು ಎಂದು ಅವರು ವಿನಂತಿಸಿದ್ದಾರೆ. ಮಂಡ್ಯ ಜಿಲ್ಲೆಯಲ್ಲಿ ಗೌರಿ-ಗಣೇಶ ಹಬ್ಬವನ್ನು ಎಲ್ಲ ಧರ್ಮಗಳ ಭಾವನೆಗಳಿಗೆ ಗೌರವ ನೀಡುವ ಜೊತೆಗೆ ಶಾಂತಿ, ಸಾಮರಸ್ಯ ಹಾಗೂ ಸಂಭ್ರಮದಿಂದ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಕರೆ ನೀಡಿದ್ದಾರೆ. ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಮಂಡ್ಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಗೌರಿ-ಗಣೇಶ ಹಬ್ಬದ ಸೌಹಾರ್ದತಾ ಸಭೆಯಲ್ಲಿ ಮಾತನಾಡಿದ ಅವರು, ಹಬ್ಬದ ಸಂದರ್ಭದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಯಾವುದೇ ರೀತಿಯ ಧಕ್ಕೆಯಾಗದಂತೆ ಪ್ರತಿಯೊಬ್ಬರೂ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು ಎಂದರು.

**********

ಬೆಂಗಳೂರು ನಗರದಲ್ಲಿ ತೆರವುಗೊಳಿಸಿದ ಪಾದಚಾರಿ ಮಾರ್ಗಗಳಲ್ಲಿ ಮರು ಒತ್ತುವರಿ ನಡೆಯದಂತೆ ಕ್ರಮ ಕೈಗೊಳ್ಳಬೇಕು ಎಂದು ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ನಿಟ್ಟಿನಲ್ಲಿ ಪ್ರತಿ ನಗರಪಾಲಿಕೆ ವ್ಯಾಪ್ತಿಯಲ್ಲಿ ಜಂಟಿ ಟಾಸ್ಕ್‌ಫೋರ್ಸ್ ರಚಿಸಿ, ನಿರಂತರ ಮೇಲ್ವಿಚಾರಣೆ ಹಾಗೂ ಜಂಟಿ ಕಾರ್ಯಾಚರಣೆ ನಡೆಸಬೇಕೆಂದು ಅವರು ಇಂದು ವರ್ಚುವಲ್ ಮೂಲಕ ನಡೆದ ಸಭೆಯಲ್ಲಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಒತ್ತುವರಿ ತೆರವುಗೊಳಿಸಿದ ಬಳಿಕ ಮತ್ತೆ ಅದೇ ಸ್ಥಳದಲ್ಲಿ ಮರು ಒತ್ತುವರಿ ನಡೆಯುತ್ತಿರುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಸೂಚಿಸಿದ್ದಾರೆ.

**********

ಪ್ರವಾಸೋದ್ಯಮ ಇಲಾಖೆಯಿಂದ ಪರಿಶಿಷ್ಟ ಜಾತಿ, ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ತರಬೇತಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಕುರುಗೋಡಿನಲ್ಲಿ  ಇಂದು ವಿತರಿಸಲಾಯಿತು. ಕಂಪ್ಲಿ ಶಾಸಕ ಜೆ.ಎನ್.ಗಣೇಶ್ ಮೊಬೈಲ್ ಕ್ಯಾಂಟೀನ್ ವಾಹನಗಳನ್ನು ಹಸ್ತಾಂತರಿಸಿದರು. ಮೊಬೈಲ್ ಕ್ಯಾಂಟೀನ್ ವಾಹನ ಖರೀದಿಸಲು ಪ್ರವಾಸೋದ್ಯಮ ಇಲಾಖೆಯಿಂದ ರೂಪಾಯಿ ೫ ಲಕ್ಷಗಳ ಸಹಾಯಧನ ಒದಗಿಸಲಾಗಿದೆ.

**********

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಕಾನ್‌ಸ್ಟೇಬಲ್ ಹುದ್ದೆಗಳ ನೇರ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಾಡಿದ್ದು ನಡೆಸುತ್ತಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು ೨ ಸಾವಿರದ ೪೯೫ ಅಭ್ಯರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದಾರೆ. ಚಿಕ್ಕಬಳ್ಳಾಪುರ ನಗರದ ೬ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.ಈಗಾಗಲೇ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸೂಚಿಸಿ ಪಟ್ಟಿ ಮಾಡಿರುವ ಯಾವುದೇ ನಿಷೇದಿತ ವಸ್ತು, ಉಪಕರಣಗಳನ್ನು ತೆಗೆದುಕೊಂಡು ಹೋಗಲು ಅವಕಾಶವಿರುವುದಿಲ್ಲ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

*****END*****